JULY 27, 2025

# AKASHAVANI - DHARWAD
# PRADESH SAMACHARA (KANNADA) 12 PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ದೇಶದಲ್ಲಿ ಬಾಹ್ಯಾಕಾಶ ನವೋದ್ಯಮಗಳು** ವೇಗವಾಗಿ ಬೆಳೆಯುತ್ತಿವೆ, ಐದು ವರ್ಷಗಳ ಹಿಂದೆ ಕೇವಲ 50 ರಷ್ಟಿದ್ದ ನವೋದ್ಯಮಗಳ ಸಂಖ್ಯೆ ಇಂದು, 200 ರ ಸಂಖ್ಯೆ ದಾಟಿರುವುದು ಉತ್ತಮ ಬೆಳವಣಿಗೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೇಳಿದರು. ಆಕಾಶವಾಣಿಯ ಜನಪ್ರಿಯ ಮನ್ ಕಿ ಬಾತ್ ಕಾರ್ಯಕ್ರಮದ, 124 ನೇ ಸಂಚಿಕೆಯಲ್ಲಿ, ದೇಶ ವಿದೇಶಗಳಲ್ಲಿರುವ ಭಾರತೀಯರನ್ನು ಉದ್ದೇಶಿಸಿ ಅವರು ಮಾತನಾಡಿದರು. ಮಹಾರಾಷ್ಟ್ರದ 11 ಕೋಟೆಗಳು ಹಾಗೂ ತಮಿಳುನಾಡಿನ 1 ಕೋಟೆ ಸೇರಿದಂತೆ, ಒಟ್ಟು 12 ಮರಾಠಾ ಕೋಟೆಗಳನ್ನು, ಯುನೆಸ್ಕೋ ವಿಶ್ವ ಪರಂಪರೆಯ ತಾಣವಾಗಿ ಘೋಷಿಸಿರುವುದು ಹೆಮ್ಮೆ ಹಾಗೂ ಗೌರವದ  ವಿಚಾರವಾಗಿದೆ ಎಂದರು. ಕರ್ನಾಟಕದ ಎರಡು ಪ್ರಮುಖ ಕೋಟೆಗಳ ಬಗ್ಗೆ ಉಲ್ಲೇಖಿಸಿದ ಪ್ರಧಾನಮಂತ್ರಿ ಅವರು, ಗುಲ್ಬರ್ಗ ಕೋಟೆ ಬಹಳ ದೊಡ್ಡದಿದೆ ಹಾಗೂ ವಿಶಾಲವಾಗಿದೆ. ಚಿತ್ರದುರ್ಗ ಕೋಟೆಯು, ನೋಡುಗರಲ್ಲಿ ಕುತೂಹಲ ಮೂಡಿಸುತ್ತದೆ ಎಂದರು.

<><><>

**ರಾಜ್ಯದ ಎಲ್ಲ ಗ್ರಾಮ ಪಂಚಾಯಿತಿಗಳ,** ಬಾಪೂಜಿ ಸೇವಾ ಕೇಂದ್ರಗಳಲ್ಲಿ ಈಗಾಗಲೇ 81 ಸರ್ಕಾರಿ ಸೇವೆಗಳನ್ನು ಒದಗಿಸಲಾಗುತ್ತಿದ್ದು, ಇದರ ಜೊತೆ ನೂತನ 208 ಸರ್ಕಾರಿ ಸೇವೆಗಳನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುವುದು ಎಂದು ಪಂಚಾಯತ್ ರಾಜ್ ಮತ್ತು ಗ್ರಾಮಿಣಾಭಿವೃದ್ಧಿ ಖಾತೆ ಸಚಿವ ಪ್ರಿಯಾಂಕ ಖರ್ಗೆ ಹೇಳಿದ್ದಾರೆ. ಎಕ್ಸ್ ಖಾತೆಯಲ್ಲಿ ಮಾಹಿತಿ ನೀಡಿರುವ ಅವರು, 46 ವಿವಿಧ ಇಲಾಖೆಗಳ 800 ಕ್ಕೂ ಹೆಚ್ಚು ಸೇವೆಗಳಲ್ಲಿ ಗ್ರಾಮೀಣ ಜನತೆಗೆ ಉಪಯೋಗವಾಗುವ ಸೇವೆಗಳನ್ನು ಒಂದೇ ಸೂರಿನಡಿ ನೀಡಲಾಗುವುದು ಎಂದರು.

<><><>

**ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಮ ಪಾಲುದಾರಿಕೆಯಲ್ಲಿ,** ರಾಜ್ಯದಲ್ಲಿ ಒಂದೂವರೆ ವರ್ಷದಲ್ಲಿ, ಹದಿನಾಲ್ಕು ಸಾವಿರ ಕೋಟಿ ರೂಪಾಯಿಗಳನ್ನು  ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರು ಮತ್ತು ಒಳಚರಂಡಿ ಕಾಮಗಾರಿಗಳಿಗೆ ವಿನಿಯೋಗಿಸಲಾಗಿದೆ ಎಂದು ನಗರಾಭಿವೃದ್ಧಿ ಖಾತೆ ಸಚಿವ ಬಿ.ಎಸ್.ಸುರೇಶ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರಿನ, ಗೊಟ ಕನಾಪುರದಲ್ಲಿ, ಅಮೃತ್– 2 ಯೋಜನೆಯಡಿ, ವಾಟದ ಹೊಸಹಳ್ಳಿ ಕೆರೆಯಿಂದ ಗೌರಿಬಿದನೂರು ನಗರಕ್ಕೆ ಕುಡಿಯುವ ನೀರು ಪೂರೈಕೆ, ಯೋಜನೆಯ ಒಟ್ಟು 66 ಕೋಟಿ ರೂಪಾಯಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

<><><>

**ಎಸ್.ಎಸ್.ಎಲ್.ಸಿ. ಪರೀಕ್ಷೆಯ ಉತ್ತೀರ್ಣ ಅಂಕ,** ಶೇಕಡ 33 ಕ್ಕೆ ಇಳಿಸುವ ಪ್ರಸ್ತಾವವನ್ನು, ತಜ್ಞರ ಸಲಹೆಯಂತೆ ತೀರ್ಮಾನಿಸುವುದಾಗಿ, ಶಾಲಾ ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ ಸ್ಪಷ್ಟ ಪಡಿಸಿದ್ದಾರೆ. ಕೋಲಾರ ಜಿಲ್ಲೆ, ಮಾಲೂರು ತಾಲೂಕು, ಮಾಸ್ತಿಯಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಯ, ನೂತನ ಕಟ್ಟಡವನ್ನು ಉದ್ಘಾಟಿಸಿ, ಅವರು ಮಾತನಾಡಿದರು. ಅಜೀಮ್ ಪ್ರೇಮ್‌ಜಿ ಅವರು, ಸಾವಿರದ 500 ಕೋಟಿ ರೂಪಾಯಿ ನೀಡಿದ್ದು, ಶೈಕ್ಷಣಿಕ ಕ್ಷೇತ್ರದ ಅಭಿವೃದ್ಧಿಗೆ, 2 ಸಾವಿರದ 500 ಕೋಟಿ ರೂಪಾಯಿ ಅನುದಾನ ಬಿಡುಗಡೆಯಾಗಿದೆ. ಗಡಿ ಭಾಗದ ಶಾಲೆಗಳನ್ನು ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ, ಎಂದರು.

<><><>

**ಬೆಂಗಳೂರು ಕೋರಮಂಗಲದಲ್ಲಿ,** ದಕ್ಷಿಣ ಭಾರತದಲ್ಲಿ ಕೈಗಾರಿಕೆಗಳಿಗೆ ಉತ್ತೇಜನ ನೀಡಬಲ್ಲ, ರಾಷ್ಟ್ರೀಯ ಕೈಗಾರಿಕೆಗಳ ಸಂಶೋಧನೆ ಮತ್ತು ಅಭಿವೃದ್ಧಿ ಮಂಡಳಿ– ಎನ್.ಐ.ಆರ್.ಡಿ.ಸಿ ಕಚೇರಿ ಉದ್ಘಾಟನೆ ನೆರವೇರಿತು.

<><><>

**ಕೇಂದ್ರೀಯ ಮೀಸಲು ಪೊಲೀಸ್ ಪಡೆ–** ಸಿ.ಆರ್.ಪಿ.ಎಫ್ ನ 87 ನೇ ಸಂಸ್ಥಾಪನಾ ದಿನಾಚರಣೆಯ ಹಿನ್ನೆಲೆ, ಇಂದು ಶಿವಮೊಗ್ಗದ ಭದ್ರಾವತಿಯಲ್ಲಿ ಫಿಟ್ ಇಂಡಿಯಾ ಸೈಕಲ್ ರ್‍ಯಾಲಿಯನ್ನು ಆಯೋಜಿಸಲಾಯಿತು.

<><><>

**ಹಿರಿಯ ಸಂಗೀತ ಕಲಾವಿದರಾದ ಧಾರವಾಡದ** ಪಂಡಿತ್ ಚಂದ್ರಶೇಖರ ಪುರಾಣಿಕಮಠ ಅವರ, 15 ನೇ ಪುಣ್ಯ ಸ್ಮರಣೆ ಕಾರ್ಯಕ್ರಮ ಇಂದು ಸಂಜೆ 5 ಗಂಟೆಗೆ ಸಾಧನಕೇರಿಯ ಗುರುಕೃಪಾದಲ್ಲಿ ಜರುಗಲಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>